ವಾರ್ತಾ ಭಾರತಿ

Jul 21, 2024

# ತಂತ್ರಜ್ಞಾನದಿಂದ ರೈತರ ಆತ್ಮಹತ್ಯೆ ತಡೆಗಟ್ಟಲು ಸಾಧ್ಯ: ಡಾ.ಕೃಷ್ಣ

ಬೆಂಗಳೂರು, ಜು.20: ಕೃಷಿಯಲ್ಲಿ ಉತ್ತಮ ಮಾರುಕಟ್ಟೆ, ಯಾಂತ್ರೀಕರಣ ಹಾಗೂ ಆಧುನಿಕ ತಂತ್ರಜ್ಞಾನ ಸಮರ್ಪಕವಾಗಿ ಬಳಸಿಕೊಂಡಾಗ ರೈತರ ಆತ್ಮಹತ್ಯೆ ತಡೆಗಟ್ಟಬಹುದು ಎಂದು ಭಾರತ್ ಬಯೋಟೆಕ್ ಲಿಮಿಟೆಡ್‌ನ ಅಧ್ಯಕ್ಷ ಡಾ.ಕೃಷ್ಣ ಅಭಿಪ್ರಾಯಪಟ್ಟಿದ್ದಾರೆ.

ಶನಿವಾರ ನಗರದಲ್ಲಿರುವ ಕೃಷಿ ವಿವಿಯಲ್ಲಿ ಪ್ರತಿಭಾವಂತ ಮತ್ತು ಸಾಧನೆಗೈದ ಹಳೆಯ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ 'ಪ್ರತಿಭಾ ಪುರಸ್ಕಾರ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಹಾರ ಭದ್ರತೆಯು ಮುಂದಿನ ದಿನಗಳಲ್ಲಿ ಅತಿ ಮುಖ್ಯ ಸವಾಲಾಗಿದ್ದು, ಈ ದಿಶೆಯಲ್ಲಿ ಯುವಜನತೆ ಕೃಷಿಯಲ್ಲಿ ತೊಡಗಿಸಿಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ಸಲಹೆ ನೀಡಿದರು.

ಮಹಾರಾಷ್ಟ್ರದ ನಾಗಪುರ ಜಿಲ್ಲೆ ಹಾಗೂ ಕರ್ನಾಟಕದ ಕೋಲಾರ ಜಿಲ್ಲೆಯಲ್ಲಿ ಒಂದೆ ರೀತಿಯ ಮಳೆ ಪ್ರಮಾಣ ಹೊಂದಿದ್ದರೂ, ನಾಗಪುರ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇದಕ್ಕೆ ಪ್ರಮುಖ ಕಾರಣ ರೈತರು ಏಕ ಬೆಳೆ ಪದ್ಧತಿ ಅನುಸರಿಸುತ್ತಿರುವುದು. ಆದರೆ, ಕೋಲಾರ ಜಿಲ್ಲೆಯಲ್ಲಿ ರೈತರು ಮಾರುಕಟ್ಟೆ ಬೇಡಿಕೆಯನ್ವಯ ಬಹು ಬೆಳೆಪದ್ಧತಿ ಅನುಸರಿಸುತ್ತಿರುವುದರಿಂದ ಆತ್ಮಹತ್ಯೆ ಸಂಖ್ಯೆಯ ಪ್ರಮಾಣ ನಗಣ್ಯ ಎಂದು ಅವರು ಮಾಹಿತಿ ನೀಡಿದರು.

ರೈತರು ಹೆಚ್ಚು ಲಾಭ ತರುವ ಬಹು ಬೆಳೆ ಪದ್ಧತಿಗಳು ಮತ್ತು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಲು ಮುಂದಾಗಬೇಕು. ಹೊಸ ಅನ್ವೇಷಣೆಗಳು ಹಾಗೂ ಕೈಗಾರಿಕೆಗಳಿಗೆ ಆದ್ಯತೆ ನೀಡಿದಾಗ ಮಾತ್ರ, ದೇಶದ ಸರ್ವತೋನ್ಮುಖಿ ಅಭಿವೃದ್ಧಿ ಸಾಧಿಸಲು ಸಾಧ್ಯ. ರೈತರು ಕೃಷಿಯ ಜೊತೆಗೆ ತೋಟಗಾರಿಕೆ, ಪಶುಸಂಗೋಪನೆ ಮುಂತಾದ ಆದಾಯ ನೀಡುವ ಕಸುಬುಗಳನ್ನು ಅನುಸರಿಸಬೇಕು ಎಂದು ಕೃಷ್ಣ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕುಲಸಚಿವ ಡಾ.ಬಸವೇಗೌಡ, ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ಡಾ.ಟಿ.ಕೆ.ಪ್ರಭಾಕರ ಶೆಟ್ಟಿ, ಡಾ.ಎಚ್.ಎಲ್.ಹರೀಶ್ ಹಾಗೂ ಪುರಸ್ಕೃತರಾದ ಆರ್.ರಮ್ಯ, ಆರ್.ರಾಹುಲ್‌ಗೌಡ, ಎಚ್.ವಿ. ಚಿದಾನಂದ ಉಪಸ್ಥಿತರಿದ್ದರು.



> ತಾಂತ್ರಿಕತೆ ಬಳಸಿಕೊಳ್ಳುವ ರೀತಿಯ ಮೇಲೆ ನಮ್ಮ ವ್ಯಕ್ತಿತ್ವ ವಿಕಸನ ನಿಂತಿದೆ. ಆದುದರಿಂದ ವಿದ್ಯಾರ್ಥಿಗಳು ಮೊಬೈಲ್ ಮೇಲೆ ಹೆಚ್ಚಾಗಿ ಅವಲಂಬಿತರಾಗದೆ ಹೆಚ್ಚು ಪುಸ್ತಕ ಓದುವ ಮತ್ತು ಪ್ರತಿನಿತ್ಯ ಜಗತ್ತಿನೆಲ್ಲಡೆ ನಡೆಯುವ ವಿದ್ಯಾಮಾನಗಳ ಬಗ್ಗೆ ತಿಳಿದುಕೊಳ್ಳಲು ದಿನಪತ್ರಿಕೆಗಳು ಹಾಗೂ ವಿದ್ಯುನ್ಮಾನಗಳ ವಾರ್ತೆಗಳನ್ನು ವಾಚಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು.
>
> -ಡಾ.ಎಸ್.ವಿ.ಸುರೇಶ,
> ಕುಲಪತಿ ಕೃಷಿ ವಿವಿ

ಉದಯವಾಣಿ

ಭಾನುವಾರ, ಜುಲೈ 21, 2024

# ಕೃಷಿ ವಿವಿ ಹಳೆಯ ವಿದ್ಯಾರ್ಥಿಗಳಿಗೆ ಸನ್ಮಾನ

## ಸಾಧಿಸುವ ಮನಸ್ಸಿದ್ದರೆ ಯಶಸ್ಸು ಸುಲಭ ಸಾಧ್ಯ: ಜಿಕೆವಿಕೆ ಕುಲಪತಿ ಡಾ.ಎಸ್.ವಿ.ಸುರೇಶ್

■ ಉದಯವಾಣಿ ಸಮಾಚಾರ

**ಬೆಂಗಳೂರು:** ಪ್ರತಿಯೊಬ್ಬ ವಿದ್ಯಾರ್ಥಿ ಜೀವನದಲ್ಲಿ ಸಾಧನೆಯ ಗುರಿ ಇಟ್ಟುಕೊಂಡು, ಸಾಧಿಸುವ ನಿಟ್ಟಿನಲ್ಲಿ ಕಾರ್ಯಾಚರಿಸಬೇಕು ಎಂದು ಬೆಂಗಳೂರು ಕೃಷಿ ವಿವಿ ಕುಲಪತಿ ಡಾ. ಎಸ್.ವಿ. ಸುರೇಶ್ ತಿಳಿಸಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕಾಲೇಜಿನ ಪ್ರತಿಭಾನ್ವಿತ ಮತ್ತು ಉನ್ನತ ಸಾಧನೆಗೈದ ಹಳೇ ವಿದ್ಯಾರ್ಥಿಗಳಿಗೆ 'ಪ್ರತಿಭಾ ಪುರಸ್ಕಾರ' ಸಮ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಾವಿರ ಉಳಿ ಪೆಟ್ಟು ಬಿದ್ದಾಗಲೇ ಒಂದು ಸುಂದರ ವಿಗ್ರಹ ರೂಪಗೊಳ್ಳುತ್ತದೆ ಎನ್ನುವ ಅನುಭವದ ಮಾತನ್ನು ಅರ್ಥೈಸಿಕೊಂಡಾಗಲೇ ವಿದ್ಯಾರ್ಥಿಗಳು ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ. ವಿದ್ಯಾರ್ಥಿಗಳು ವಿದ್ಯಾವಂತರಾಗಿ ನಾಗರಿಕ ಸಮಾಜಕ್ಕೆ ಬಹು ಉಪಯುಕ್ತ ಕೆಲಸ ಮಾಡಬೇಕು ಎಂದರು.

ಸಮಸ್ಯೆಗಳು ನಮ್ಮ ಜೀವನ ರೂಪಿಸಲು ಎದುರಾಗುವ ಅವಕಾಶಗಳು. ಅವುಗಳನ್ನು ಮೆಟ್ಟಿನಿಂತು ಛಲದಿಂದ ಸಾಧನೆ ಮಾಡಬೇಕು. ಇದು ಸಾಧ್ಯ, ಅದು ಅಸಾಧ್ಯ ಎಂಬ ನಂಬಿಕೆಗೆ ಜೋತು ಬಿದ್ದರೆ ಮನುಷ್ಯನು ಜೀವನದಲ್ಲಿ ಸಾಧನೆ ಮಾಡಲು ಸಾಧ್ಯವಾಗುವುದಿಲ್ಲ, ಸಾಧಿಸುವ ಮುಕ್ತ ಮನಸ್ಸು ಇದ್ದರೇ ಯಶಸ್ಸು ಸುಲಭವಾಗುತ್ತದೆ. ಜತೆಗೆ ಸಾಧನೆಯ ಉತ್ತುಂಗಕ್ಕೆ ಏರಲು ಸಾಧ್ಯವಾಗುವುದು. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಗುರಿಮುಟ್ಟುವ ಛಲ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಭಾರತ್ ಬಯೋಟೆಕ್ ಅಂತಾರಾಷ್ಟ್ರೀಯ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಡಾ. ಕೃಷ್ಣ ಎಲ್ಲಾ ಮಾತನಾಡಿ, ಮಹಾರಾಷ್ಟ್ರದ ನಾಗಪುರ ಹಾಗೂ ಕೋಲಾರ ಜಿಲ್ಲೆಗಳು ಒಂದೇ ರೀತಿಯ ಮಳೆಯ ಪ್ರಮಾಣವನ್ನು ಹೊಂದಿದ್ದರೂ ಸಹ ನಾಗಪುರ ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇದಕ್ಕೆ ಕಾರಣ ಏಕ ಬೆಳೆ ಪದ್ಧತಿಯನ್ನು ಅನುಕರಣೆ. ಆದರೆ ಕೋಲಾರದಲ್ಲಿ ರೈತರು ಮಾರುಕಟ್ಟೆ ಬೇಡಿಕೆಯನ್ವಯ ಬಹು ಬೆಳೆ ಪದ್ಧತಿಯನ್ನು ಅನುಸರಿಸುತ್ತಿದ್ದಾರೆ. ಆದುದರಿಂದ, ರೈತರು ಹೆಚ್ಚು ಲಾಭ ತರುವ ಬಹು ಬೆಳೆ ಪದ್ಧತಿಗಳು ಅಳವಡಿಸಿಕೊಳ್ಳಲು ಮುಂದಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಕೆವಿಕೆಯ ಹಳೆಯ ವಿದ್ಯಾರ್ಥಿಗಳಾದ ಭಾರತ್ ಬಯೋಟೆಕ್ ಅಂತಾರಾಷ್ಟ್ರೀಯ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಡಾ. ಕೃಷ್ಣ ಎಲ್ಲಾ, ಭಾರತೀಯ ಆಡಳಿತ ಸೇವೆಗೆ ಆಯ್ಕೆಯಾದ ಆರ್. ರಮ್ಯಾ, ಭಾರತೀಯ ಅರಣ್ಯ ಸೇವೆಗೆ ಆಯ್ಕೆಯಾದ ಆರ್. ರಾಹುಲ್‌ಗೌಡ ಹಾಗೂ ಎಚ್.ವಿ. ಚಿದಾನಂದ ಅವರನ್ನು ಸಮ್ಮಾನಿಸಲಾಯಿತು. ಕುಲಸಚಿವ ಡಾ. ಬಸವೇಗೌಡ, ವ್ಯವಸ್ಥಾಪನಾ ಮಂಡಳಿಯ ಸದಸ್ಯ ಡಾ. ಟಿ.ಕೆ. ಪ್ರಭಾಕರ ಶೆಟ್ಟಿ, ಡಾ.ಹರೀಶ್ ಉಪಸ್ಥಿತರಿದ್ದರು.



ಕಾರ್ಯಕ್ರಮದಲ್ಲಿ ಜಿಕೆವಿಕೆಯ ಹಳೇ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಹೊಸ ದಿಗಂತ
ಭಾನುವಾರ, 21 ಜುಲೈ 2024

## ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿ.ಸುರೇಶ

# ವಿದ್ಯಾರ್ಥಿ ಜೀವನದಲ್ಲಿ ಗುರಿ ಇರಲಿ

**ಬೆಂಗಳೂರು:** ಪ್ರತಿಯೊಬ್ಬ ವಿದ್ಯಾರ್ಥಿಯು ಜೀವನದಲ್ಲಿ ಮಹತ್ತರವಾದ ಸಾಧನೆಯನ್ನು ಸಾಧಿಸುವತ್ತ ಸಾಗಬೇಕು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿ. ಸುರೇಶ ಅವರು ತಿಳಿಸಿದರು.

ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ತನ್ನ ಪ್ರತಿಭಾನ್ವಿತ ಮತ್ತು ಉನ್ನತ ಸಾಧನೆಗೈದ ಹಳೆ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಾಧನೆಗೈಯಲು ಸ್ವಾಮಿ ವಿವೇಕಾನಂದರ ಸಂದೇಶದಂತೆ ಗುರಿಇರಬೇಕು. ಗುರಿಯನ್ನುತಲುಪಲುನಿರಂತರ ಸಾಧನೆ ಅವಶ್ಯಕವಾಗಿದ್ದು, ಸಮಸ್ಯೆಗಳನ್ನು ಅವಕಾಶಗಳಾಗಿ ಮಾರ್ಪಡಿಸಿಕೊಳ್ಳುವ ಚತುರತೆಯನ್ನು ವಿದ್ಯಾರ್ಥಿಗಳು ರೂಡಿಸಿಕೊಳ್ಳಬೇಕು ಎಂದು ಹೇಳಿದರು.

**ದಿನಪತ್ರಿಕೆಗಳನ್ನು ಓದುವ ಅಭ್ಯಾಸವನ್ನು ಬೆಳಸಿಕೊಳ್ಳಿ:** ಸೋತಾಗ ಕುಗ್ಗದೆ ಎದ್ದು ನಿಲ್ಲುವ ಗುಣವನ್ನು ಅಳವಡಿಸಿಕೊಂಡಾಗ ಎಂತಹ ಪರಿಸ್ಥಿತಿಯನ್ನು ಸಹ ಎದುರಿಸಬಹುದು. ತಾಂತ್ರಿಕತೆಗಳನ್ನು ಬಳಸಿಕೊಳ್ಳುವ ರೀತಿಯ ಮೇಲೆ ನಮ್ಮ ವ್ಯಕ್ತಿತ್ವ ವಿಕಸನ ನಿಂತಿದೆ. ಆದುದರಿಂದ ವಿದ್ಯಾರ್ಥಿಗಳು ಮೊಬೈಲ್ ಮೇಲೆ ಹೆಚ್ಚಾಗಿ ಅವಲಂಬಿತರಾಗದೇ ಹೆಚ್ಚು ಪುಸ್ತಕಗಳನ್ನು ಓದುವ ಮತ್ತು ಪ್ರತಿನಿತ್ಯ ಜಗತ್ತಿನೆಲ್ಲಡೆ ಜರುಗುವ ವಿದ್ಯಾಮಾನಗಳ ಬಗ್ಗೆ ತಿಳಿದುಕೊಳ್ಳಲು ಪ್ರತಿನಿತ್ಯ ದಿನಪತ್ರಿಕೆಗಳು ಹಾಗೂ ವಿದ್ಯುನ್ಮಾನಗಳಲ್ಲಿ ವಾರ್ತೆಗಳನ್ನು ನೋಡುವ ಅಭ್ಯಾಸ ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

ಭಾರತ್ ಬಯೋಟೆಕ್ ಅಂತಾರಾಷ್ಟ್ರೀಯ ಲಿ. ಅಧ್ಯಕ್ಷ ಡಾ.ಕೃಷ್ಣ ಮಾತನಾಡಿ, ಆಹಾರ ಭದ್ರತೆಯು ಮುಂದಿನ ದಿನಗಳಲ್ಲಿ ಅತಿ ಮುಖ್ಯ ಸವಾಲಾಗಿದ್ದು, ಯುವಕರು ತಮ್ಮನ್ನು ತಾವು ಹೆಚ್ಚಾಗಿ ಕೃಷಿಯಲ್ಲಿ ತೊಡಗಿಸಿಕೊಳ್ಳುವುದು ಅತ್ಯವಶ್ಯಕವಾಗಿದೆ. ಕೃಷಿಯಲ್ಲಿ ಅತ್ಯುತ್ತಮ ಮಾರುಕಟ್ಟೆ, ಯಾಂತ್ರಿಕರಣ ಹಾಗೂ ಆಧುನಿಕ ತಂತ್ರಜ್ಞಾನಗಳನ್ನು ಸಮರ್ಪಕವಾಗಿ ಬಳಸಿಕೊಂಡಾಗ ರೈತರ ಆತ್ಮಹತ್ಯೆಯನ್ನು ತಡೆಗಟ್ಟಬಹುದು. ರೈತರು ಹೆಚ್ಚು ಲಾಭತರುವ ಬಹು ಬೆಳೆ ಪದ್ಧತಿಗಳು ಮತ್ತು ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಲು ಮುಂದಾಗಬೇಕು ಎಂದು ತಿಳಿಸಿದರು.



### ಕೈಗಾರಿಕೆಗಳಿಗೆ ಆದ್ಯತೆ

ರೈತರ ಹಿತದೃಷ್ಟಿಯಿಂದ ಸಮಗ್ರ ಕೃಷಿ ವಿಶ್ವವಿದ್ಯಾನಿಲಯಗಳು ಅನಿವಾರ್ಯವಾಗಿದೆ. ಹೊಸ ಅನ್ವೇಷಣೆಗಳು ಹಾಗೂ ಕೈಗಾರಿಕೆಗಳಿಗೆ ಆದ್ಯತೆ ನೀಡಿದಾಗ ಮಾತ್ರ ದೇಶದ ಸಂಪೂರ್ಣ ಅಭಿವೃದ್ಧಿ ಸಾಧ್ಯ. ರೈತರು ಕೃಷಿಯ ಜತೆಗೆ ತೋಟಗಾರಿಕೆ, ಪಶುಸಂಗೋಪನೆ, ಅರಣ್ಯ ಮುಂತಾದ ಆದಾಯ ನೀಡುವ ಕಸುಬುಗಳನ್ನು ಅನುಸರಿಸುತ್ತಿರುವುದರಿಂದ ರೈತರ ಆದಾಯ ಹೆಚ್ಚಳವಾಗುತ್ತದೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕೃ.ವಿ.ವಿ. ಬೆಂಗಳೂರಿನ ವ್ಯವಸ್ಥಾಪನಾ ಮಂಡಳಿಯ ಸದಸ್ಯ ಡಾ.ಟಿ.ಕೆ.ಪ್ರಭಾಕರ ಶೆಟ್ಟಿ, ಡಾ.ಎಚ್.ಎಲ್. ಹರೀಶ್ ಹಾಗೂ ಬೆಂಗಳೂರು ಕೃಷಿ ವಿಶ್ವ ವಿದ್ಯಾನಿಲಯದ ಅಧಿಕಾರಿಗಳು ಉಪಸ್ಥಿತರಿದ್ದರು.